# ಹಂಪಿ ಟೈಮ್ಸ್
HAMPI TIMES

ಸಂಪಾದಕ: ಬಸಾಪುರ ಬಸವರಾಜ
EDITOR: BASAPUR BASAVARAJA

ಕನ್ನಡ ದಿನಪತ್ರಿಕೆ
KANNADA DAILY



NOW HAMPI TIMES E-PAPER HAS BEEN REACHED
50,000
Plus readers
Place Your Ads here
Reach New Audience
9448633038 Contact For: News, Events Coverage, Ads
hampitimes@gmail.com Valmiki Circle, Hosapete-583201





ಸಂಪುಟ:01 Volume:01 • ಸಂಚಿಕೆ:267 Issue:267 • ನೋಂದಣಿ ಸಂ.:KARKAN27911 Reg.No:KARKAN27911 • ವಿಜಯನಗರ VIJAYANAGARA • 20.03.2024 • ಬುಧವಾರ Wednesday • ಪುಟ:04 Page:04 • ಬೆಲೆ:2 Rs:2


ಮೈಮೇಲೆ ಹರಿದ ಬಟ್ಟೆ ಇದ್ದರೂ ಚಿಂತೆಯಿಲ್ಲ. ಕೈಯಲ್ಲೊಂದು ಕನ್ನಡ ಪತ್ರಿಕೆ ಇರಲಿ.
ಡಿ..ವಿ.ಜಿ.


**ಇಂಡಸ್ಟ್ರೀಯಲ್ ಶೆಡ್ ಸೈಟ್ ಮಾರಾಟಕ್ಕಿದೆ**

ಹೊಸಪೇಟೆ ನಗರದ ಟಿ.ಬಿ.ಡ್ಯಾಂ ರಸ್ತೆ, ಶ್ರೀ ಸಾಯಿಬಾಬಾ ದೇವಸ್ಥಾನದ ಎದುರಿನ ಕೆಎಸ್ಎಸ್ಐಡಿಸಿ (KSSIDC) ಇಂಡಸ್ಟ್ರೀಯಲ್ ಪ್ರದೇಶದಲ್ಲಿರುವ ಅನ್ನಪೂರ್ಣ ಗ್ರಾನೈಟ್ ಶೆಡ್ ಹಾಗೂ ಖಾಲಿ ಜಾಗ (L-19, R-15 ) ಎರಡು ಸೈಟುಗಳ ಒಟ್ಟು ವಿಸ್ತೀರ್ಣ 10,300 ಚ.ಅಡಿ ಇದ್ದು, ಮಾರಾಟಕ್ಕಿರುತ್ತದೆ. ಆಸಕ್ತರು ಹೆಚ್ಚಿನ ಮಾಹಿತಿಗಾಗಿ ಸಂಪರ್ಕಿಸಿರಿ

**98441 25317**
**99861 33299**



**ಬೇಕಾಗಿದ್ದಾರೆ**

ಶಾನಭಾಗ ಟವರ್ಸ್‌ನಲ್ಲಿ ಹಾಜರಿ ಹೆಬ್ಬಟ್ಟು ಮಿಷನ್ ಹಾಕುವವರು ಬೇಕಾಗಿದ್ದಾರೆ. ಮೂರರಿಂದ ನಾಲ್ಕು Biometric Fingerprint Time & Attendance Machine ಮಷಿನ್ ಹಾಕಬೇಕಿದೆ. ಸರ್ವಿಸ್ ನೀಡಲಿಚ್ಚಿಸುವವರು ಸಂಪರ್ಕಿಸಿ.

**ಶಾನಭಾಗ ಟವರ್ಸ್ ನ್ಯಾಷನಲ್ (ಪ್ರೈ) ಲಿಮಿಟೆಡ್**
ಶಾನಭಾಗ ಸರ್ಕಲ್, ಹೊಸಪೇಟೆ-583201

**9482147421**
**9449193615**


# ಲೋಕ ಚುನಾವಣೆ ಅಕ್ರಮ ವೆಚ್ಚದ ಮೇಲೆ ತೀವ್ರ ನಿಗಾ

## ಬಳ್ಳಾರಿ ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಹೇಳಿಕೆ

■ ಹಂಪಿ ಟೈಮ್ಸ್ ಬಳ್ಳಾರಿ

ಲೋಕಸಭೆ ಸಾರ್ವತ್ರಿಕ ಚುನಾವಣೆ 2024ರ ಚುನಾವಣೆಯನ್ನು ಮುಕ್ತ, ನ್ಯಾಯ ಸಮ್ಮತ, ಪಾರದರ್ಶಕ ಮತ್ತು ಶಾಂತಿಯುತವಾಗಿ ನಡೆಸಲು ಅಭ್ಯರ್ಥಿಗಳು ಮತ್ತು ರಾಜಕೀಯ ಪಕ್ಷಗಳು ಸಹಕರಿಸಬೇಕು ಹಾಗೂ ಹಣದ ದುರುಪಯೋಗ, ಸಾರ್ವಜನಿಕರಿಗೆ ಆಸೆ, ಆಮಿಷಗಳಿಗೆ ಒಳಪಡಿಸುವಂತಿಲ್ಲ ಎಂದು ಜಿಲ್ಲಾ ಚುನಾವಣಾಧಿಕಾರಿಗಳಾಗಿರುವ ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ಸೂಚನೆ ನೀಡಿದ್ದಾರೆ.



ಚುನಾವಣೆ ಪ್ರಕ್ರಿಯೆಗೆ ಸಂಬಂಧಿಸಿದಂತೆ ಯಾವುದೇ ವ್ಯಕ್ತಿಗೆ ಲಂಚ ನೀಡಬಾರದು ಅಥವಾ ಹಣವನ್ನು ಬಳಸಿ ಲಂಚ ನೀಡಲು ಪ್ರಯತ್ನಿಸಬಾರದು. ಚುನಾವಣೆಯ ಮೇಲೆ ಪ್ರಭಾವ ಬೀರುವ ಸಲುವಾಗಿ ಸರಕುಗಳು, ಬೆಲೆಬಾಳುವ ವಸ್ತುಗಳು, ಉಡುಗೊರೆಗಳು, ಮದ್ಯ, ಇಂಧನ ಇತ್ಯಾದಿ ಬೆಲೆಬಾಳುವ ವಸ್ತುಗಳನ್ನು ಸಾಗಾಣೆ ಅಥವಾ ಶೇಖರಣೆ ಮಾಡುವಂತಿಲ್ಲ.

ಈಗಾಗಲೇ ಜಿಲ್ಲೆಯಲ್ಲಿ ಸರ್ವೇಲೆನ್ಸ್ ತಂಡಗಳು, ಚೆಕ್ ಪೋಸ್ಟ್ ಹಾಗೂ ವಿಡಿಯೊ ಕಣ್ಗಾವಲು ತಂಡಗಳು, ಫ್ಲೈಯಿಂಗ್ ಸ್ಕ್ವಾಡ್ ತಂಡಗಳು ಕಾರ್ಯನಿರ್ವಹಿಸುತ್ತಿವೆ. ವಿವರಣಾತ್ಮಕ ಮತ್ತು ದೃಢೀಕರಿಸುವ ದಾಖಲೆಗಳಿಲ್ಲದೇ ರೂ.50 ಸಾವಿರಕ್ಕಿಂತ ಹೆಚ್ಚಿನ ಹಣವನ್ನು ಸಾಗಿಸುವಂತಿಲ್ಲ.

ಚುನಾವಣೆಯ ನಿಯಮಾವಳಿ ಉಲ್ಲಂಘಿಸಿದಲ್ಲಿ ಐಪಿಸಿ ಸೆಕ್ಷನ್ 188 ಅಡಿಯಲ್ಲಿ ಅಪರಾಧವೆಂದು ಪರಿಗಣಿಸಿ, ಕಾನೂನು ಕ್ರಮ ಜರುಗಿಸಲಾಗಿಸುತ್ತದೆ ಎಂದು ಡಿಸಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ಆದೇಶದಲ್ಲಿ ತಿಳಿಸಿದ್ದಾರೆ.

# ಲೋಕಸಭಾ ಚುನಾವಣೆ ನೀತಿ ಸಂಹಿತೆ ಸಂಪರ್ಕಕ್ಕಾಗಿ ಅಧಿಕಾರಿಗಳ ವಿವರ

## ವಿಜಯನಗರ ಜಿಲ್ಲಾಧಿಕಾರಿ ಎಂ.ಎಸ್.ದಿವಾಕರ ಮಾಹಿತಿ

■ ಹಂಪಿ ಟೈಮ್ಸ್ ಹೊಸಪೇಟೆ

2024ರ ಲೋಕಸಭಾ ಚುನಾವಣೆಯ ನಿಮಿತ್ತ ವಿಜಯನಗರ ಜಿಲ್ಲೆಯಾದ್ಯಂತ ನೀತಿ ಸಂಹಿತೆ ಜಾರಿಯಲ್ಲಿದ್ದು, ಈ ಸಂಬಂಧ ವಿವಿಧ ಅಧಿಕಾರಿಗಳನ್ನು ಸಂಪರ್ಕಿಸಬಹುದಾಗಿದೆ ಎಂದು ಜಿಲ್ಲಾ ಚುನಾವಣಾಧಿಕಾರಿಗಳು ಆಗಿರುವ ಜಿಲ್ಲಾಧಿಕಾರಿಗಳಾದ ಎಂ.ಎಸ್.ದಿವಾಕರ ಅವರು ತಿಳಿಸಿದ್ದಾರೆ.



ಶ್ರೀಹರಿಬಾಬು ಜಿಲ್ಲಾ ಪೊಲೀಸ್ ಅಧಿಕ್ಷಕರು ವಿಜಯನಗರ ಜಿಲ್ಲೆ ಮೊ:9480805701, ರಾಜಶೇಖರ ಭೈರಪ್ಪನವರ, ಸಹಾಯಕ ಆಯುಕ್ತರು ಹಾಗೂ ನೋಡಲ್ ಅಧಿಕಾರಿಗಳು ವಾಣಿಜ್ಯ ತೆರಿಗೆಗಳ ಇಲಾಖೆ, ವಿಜಯನಗರ ಜಿಲ್ಲೆ, ಮೊ:9845431673, ಧರ್ಮರಾಜ್ ಖೋಡೆ, ನೋಡಲ್ ಅಧಿಕಾರಿಗಳು, ಆದಾಯ ತೆರಿಗೆ ಇಲಾಖೆ, ವಿಜಯನಗರ ಜಿಲ್ಲೆ, ಮೊ:8762259700, ಶ್ರೀ ಮಹೇಂದ್ರ ಉಪ ಆಯುಕ್ತರು, ಅಬಕಾರಿ ಇಲಾಖೇ, ವಿಜಯನಗರ ಜಿಲ್ಲೆ ಮೊ: 8762301059 ಇವರನ್ನು ಸಂಪರ್ಕಿಸಬಹುದಾಗಿದೆ ಎಂದು ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.







